## ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರ ಪತ್ರ ಸಂಖ್ಯೆ: ಡಿಇವಿ6/ದೂರು/51/2016-17 ದಿನಾಂಕ: 22-11-2016
2. ಸರ್ಕಾರದ ಪತ್ರ ಸಂಖ್ಯೆ: ಸಂ.ಗ್ರಾಅಪ:1136:ಗ್ರಾಪಂಅ:2016, ದಿನಾಂಕ:04.01.2017, ರ ಕಾರಣ ಕೇಳುವ ನೋಟಿಸ್ಸು.
3. ಆಪಾದಿತ ಸದಸ್ಯರು ಕಾರಣ ಕೇಳುವ ನೋಟಿಸ್ಸಿಗೆ ಸಲ್ಲಿಸಿದ ಸಮಜಾಯಿಷಿ ದಿನಾಂಕ: 03-02-2017
4. ಸರ್ಕಾರದ ಪತ್ರ ಸಂಖ್ಯೆ: ಸಂ.ಗ್ರಾಅಪ:1136:ಗ್ರಾಪಂಅ:2016, ದಿನಾಂಕ:28.03.2017, ರ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ: (1) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ ರವರು ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು , ಮೈಸೂರು ಜಿಲ್ಲೆ ಸದರಿಯವರು ಎರಡು ಕಡೆ ಮತದಾರರ ಗುರುತಿನ ಚೀಟಿ ಹಾಗೂ ಸರ್ಕಾರದ ವಸತಿ ಯೋಜನೆಯಡಿ ಕೆ.ಆರ್.ನಗರದಲ್ಲಿ ನಿವೇಶನ ಮತ್ತು ಮನೆ ಹಾಗೂ ಬ್ಯಾಡರಹಳ್ಳಿಯಲ್ಲಿ ನಿವೇಶನ ಮತ್ತು ಮನೆಗಳನ್ನು ಪಡೆದುಕೊಂಡು ಅಧಿಕಾರ ದುರುಪಯೋಗ ಪಡಿಸಿಕೊಂಡು ದುರ್ನಡತೆ ಎಸಗಿರುವುದು ಮೇಲ್ನೋಟಕ್ಕೆ ಕಂಡು ಬಂದಿರುವುದರಿಂದ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮದ ಕಲಂ 43-ಎ ರನ್ವಯ ಕ್ರಮ ಕೈಗೊಳ್ಳಲು ಕೋರಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (2) ರಲ್ಲಿ ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ ರವರಿಗೆ ಕಾರಣ ಕೇಳುವ ನೋಟೀಸ್ಸನ್ನು ಜಾರಿ ಮಾಡಲಾಗಿರುತ್ತದೆ. ಸದರಿ ಕಾರಣ ಕೇಳುವ ನೋಟೀಸ್ಸ್‌ಗೆ ಆಪಾದಿತರು ಮೇಲೆ ಓದಲಾದ ಕ್ರಮ ಸಂಖ್ಯೆ: (3) ರಲ್ಲಿ ತಮ್ಮ ಸಮಜಾಯಿಷಿ ನೀಡಿದ್ದು ಆರೋಪಗಳನ್ನು ಅಲ್ಲಗಳೆದಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ: (4) ರಲ್ಲಿ ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರಿಗೆ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ ನೀಡಲಾಗಿದ್ದು ಸದರಿಯವರು ವಿಚಾರಣೆಗೆ ಹಾಜರಾಗಿ ಮೌಖಿಕ ಹೇಳಿಕೆ ನೀಡಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ, ರವರು ಸಲ್ಲಿಸಿರುವ ವರದಿಯಯನ್ನು ಪರಿಶೀಲಿಸಲಾಗಿದ್ದು ಹಾಗೂ ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ರವರ ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಸರ್ಕಾರವು ಪರಿಶೀಲಿಸಿದ್ದು, ಸಂಬಂಧಪಟ್ಟ ದಾಖಲೆಗಳನ್ನು ಹಾಗೂ ವಿವರಗಳನ್ನು ಪರಿಶೀಲಿಸಿ, ಸದಸ್ಯರಿಗೆ ನೀಡಿರುವ ಕಾರಣ ಕೇಳುವ ನೋಟೀಸಿಗೆ ನೀಡಿರುವ ಸಮಜಾಯಿಷಿ ಸಮಂಜಸವಾಗಿಲ್ಲದಿರುವುದರಿಂದ ಮತ್ತು ಅದನ್ನು ಒಪ್ಪಿಕೊಳ್ಳಲು ಸೂಕ್ತ ದಾಖಲೆಗಳನ್ನು ಹಾಜರುಪಡಿಸದೆ ಇರುವ ಹಿನ್ನೆಲೆಯಲ್ಲಿ ಅವರು ದುರ್ನಡತೆಯು ಸಾಭಿತಾಗಿರುತ್ತದೆ. ಆದ್ದರಿಂದ ಅವರನ್ನು ಸದಸ್ಯತ್ವ ಸ್ಥಾನದಿಂದ ತೆಗೆದು ಹಾಕಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/1136/ಗ್ರಾಪಂಅ/2016**
**ಬೆಂಗಳೂರು, ದಿನಾಂಕ:-30-05-2017.**

ಪ್ರಸ್ತಾವನೆಯಲ್ಲಿ ವಿವರಿಸಲಾದ ಅಂಶಗಳ ಹಿನ್ನೆಲೆಯಲ್ಲಿ ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ ಇವರು ದುರ್ನಡತೆ ಎಸಗಿರುವುದರಿಂದ ಸದರಿಯವರನ್ನು ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ ಸದಸ್ಯ ಸ್ಥಾನದಿಂದ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಕಾಯ್ದೆ 1993 ರ ಪ್ರಕರಣ 43(ಎ) ರನ್ವಯ ತೆಗೆದು ಹಾಕಿ ತಕ್ಷಣದಿಂದ ಜಾರಿಗೆ ಬರುವಂತೆ ಆದೇಶಿಸಿದೆ.

(ಮಾನ್ಯ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ
ಮತ್ತು ಪಂ.ರಾಜ್ ಇಲಾಖೆ ರವರಿಂದ ಅನುಮೋದಿತ)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಪ್ರತಿಯನ್ನು:-
1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ.
2. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಕೆ.ಆರ್.ನಗರ, ತಾಲ್ಲೂಕು, ಮೈಸೂರು ಜಿಲ್ಲೆ.
3. ಶ್ರೀ ಮಹದೇವ ಹಾಲಿ ಗ್ರಾಮ ಸದಸ್ಯರು, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ
4. ಪಂಚಾಯಿತಿ ಅಭಿವೃದ್ಧಿ ಅಧಿಕಾರಿ, ಬ್ಯಾಡರಹಳ್ಳಿ ಗ್ರಾಮ ಪಂಚಾಯಿತಿ, ಕೆ.ಆರ್.ನಗರ ತಾಲ್ಲೂಕು, ಮೈಸೂರು ಜಿಲ್ಲೆ
5. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.
6. ವೆಬ್‌ಸೈಟ್, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.